ಕರ್ನಾಟಕ ಸರ್ಕಾರ
ತಾಂತ್ರಿಕ ಶಿಕ್ಷಣ ಇಲಾಖೆ

ಸಂಖ್ಯೆ: ಡಿಟಿಇ 02 ಇಎಸ್‌ಟಿ (8) 2021

ಆಯುಕ್ತರ ಕಛೇರಿ,
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ
ಬೆಂಗಳೂರು-560001,
ದಿನಾಂಕ: 17-12-2021.

## ಹಿಂಬರಹ

ಕರ್ನಾಟಕ ಸರ್ಕಾರದ ಅಧಿಸೂಚನೆ ಸಂಖ್ಯೆ: ಆಇ 10 ಮುಭನಿ 2021 ದಿನಾಂಕ 17-11-2021, ಸರ್ಕಾರದ ಅಧಿಸೂಚನೆ ಸಂಖ್ಯೆ: ಸಿಆಸುಇ 11 ಎಆರ್‌ಬಿ 2021 ದಿನಾಂಕ: 30-11-2021, ಸರ್ಕಾರದ ಆದೇಶ ಸಂಖ್ಯೆ: ಆಇ 201 ಪಿಇಎನ್ 2021 ದಿನಾಂಕ: 29-11-2021, ಸರ್ಕಾರದ ಸುತ್ತೋಲೆ ಸಂಖ್ಯೆ: ಸಿಆಸುಇ 05 ಪಿಎಂಎಸ್ 2021 ದಿನಾಂಕ: 21-01-2021, ಸರ್ಕಾರದ ಸುತ್ತೋಲೆ ಸಂಖ್ಯೆ: ಸಿಆಸುಇ 65 ಸೇನಿಸಿ 2021 ದಿನಾಂಕ: 02-11-2021 ಹಾಗೂ ಸರ್ಕಾರದ ಸುತ್ತೋಲೆ ಸಂಖ್ಯೆ: FD 84(T) Exp-1/2021 ದಿನಾಂಕ: 19-11-2021ರ ಪ್ರತಿಗಳನ್ನು ಈ ಕೆಳಕಂಡವರ ಮಾಹಿತಿಗಾಗಿ ಕಳುಹಿಸಿಕೊಡಲಾಗಿದೆ.

ಆಡಳಿತಾಧಿಕಾರಿ
ತಾಂತ್ರಿಕ ಶಿಕ್ಷಣ ಇಲಾಖೆ

ಇವರಿಗೆ:

1. ಇಲಾಖೆಯ ಅಧೀನಕ್ಕೊಳಪಡುವ ಎಲ್ಲಾ ಸರ್ಕಾರಿ/ಅನುದಾನಿತ ಇಂಜಿನಿಯರಿಂಗ್ ಕಾಲೇಜು, ಸರ್ಕಾರಿ ಪಾಲಿಟೆಕ್ನಿಕ್‌ಗಳು ಮತ್ತು ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳ ಪ್ರಿನ್ಸಿಪಾಲರುಗಳಿಗೆ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ. (ಇಲಾಖಾ ವೆಬ್‌ಸೈಟ್ ಮುಖಾಂತರ).
2. ಆಯುಕ್ತಾಲಯದ ಎಲ್ಲಾ ಜಂಟಿ ನಿರ್ದೇಶಕರು (ಆಡಳಿತ)/ (ಯೋಜನೆ)/ (ಸಿಡಿಸಿ)/ (ಎಟಿಎಸ್), ಆಡಳಿತಾಧಿಕಾರಿ, ಸಹಾಯಕ ಆಡಳಿತಾಧಿಕಾರಿ, ರಿಜಿಸ್ಟ್ರಾರ್ (ಆಡಳಿತ), ಸಾರ್ವಜನಿಕ ಸಂಪರ್ಕಾಧಿಕಾರಿ ಮತ್ತು ಎಲ್ಲಾ ಅಧಿಕಾರಿಗಳು /ಸಿಬ್ಬಂದಿಗಳಿಗೆ, ಮಾಹಿತಿಗಾಗಿ.
3. ಆಯುಕ್ತರ ಆಪ್ತಶಾಖೆಗೆ.
4. ನಿರ್ದೇಶಕರ ಆಪ್ತಶಾಖೆಗೆ.
5. ಆಯುಕ್ತಾಲಯದ ಸಂಬಂಧಪಟ್ಟ ಇಎಸ್‌ಟಿ ವಿಭಾಗಗಳ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ.
6. ಆಯುಕ್ತಾಲಯದ ಇ-ಆಡಳಿತ ವಿಭಾಗಕ್ಕೆ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ.

ESTS 8/12

<u>ಕರ್ನಾಟಕ ಸರ್ಕಾರ</u>

ಸಂಖ್ಯೆ: ಆಇ 10 ಮುಭನಿ 2021

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಧಾನ ಸೌಧ,
ಬೆಂಗಳೂರು, ದಿನಾಂಕ:17.11.2021.

<u>ಅಧಿಸೂಚನೆ</u>

ಕರ್ನಾಟಕ ಸಾಮಾನ್ಯ ಭವಿಷ್ಯ ನಿಧಿ ವಂತಿಕೆದಾರರ ಸಾಮಾನ್ಯ ಭವಿಷ್ಯ ನಿಧಿ ಖಾತೆಯಲ್ಲಿ ಜಮೆಯಾಗಿರುವ ಶಿಲ್ಕಿನ ಮೇಲಿನ ಬಡ್ಡಿ ದರವನ್ನು ದಿ:01.10.2021 ರಿಂದ ದಿ:31.12.2021 ರವರೆಗಿನ ಅವಧಿಗೆ ವಾರ್ಷಿಕ ಶೇ.7.1 ಕ್ಕೆ ನಿಗದಿಪಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು
ಅವರ ಹೆಸರಿನಲ್ಲಿ,

(ನೇತ್ರಪ್ರಭಾ ಎಂ. ಧಾಯಮಲೆ),
ಸರ್ಕಾರದ ಅಧೀನ ಕಾರ್ಯದರ್ಶಿ,
ಆರ್ಥಿಕ ಇಲಾಖೆ (ಆಡಳಿತ ಮತ್ತು ಮುಂಗಡಗಳು).

<u>ಇವರಿಗೆ:</u>

ಸಂಕಲನಕಾರರು, ಕರ್ನಾಟಕ ವಿಶೇಷ ರಾಜ್ಯ ಪತ್ರ, ಬೆಂಗಳೂರು-ಮುಂದಿನ ವಾರ ಪತ್ರದಲ್ಲಿ ಪ್ರಕಟಿಸಿ 100 ಪ್ರತಿಗಳನ್ನು ಆರ್ಥಿಕ ಇಲಾಖೆಗೆ (ಮುಂಗಡಗಳು ಶಾಖೆ) ಕಳುಹಿಸುವಂತೆ ಕೋರಲಾಗಿದೆ.

ಪ್ರತಿಯನ್ನು:

1. ಪ್ರಧಾನ ಮಹಾಲೇಖಪಾಲರು (ಲೆಕ್ಕ ಪತ್ರ & ತನಿಖೆ), ಕರ್ನಾಟಕ ವೃತ್ತ, ಬೆಂಗಳೂರು.
2. ಸರ್ಕಾರದ ಮುಖ್ಯ ಕಾರ್ಯದರ್ಶಿಗಳು/ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು,
3. ಸರ್ಕಾರದ ಎಲ್ಲಾ ಪ್ರಧಾನ ಕಾರ್ಯದರ್ಶಿಗಳು/ ಕಾರ್ಯದರ್ಶಿಗಳಿಗೆ,
4. ಎಲ್ಲಾ ಇಲಾಖಾ ಮುಖ್ಯಸ್ಥರುಗಳಿಗೆ,
5. ರಿಜಿಸ್ಟ್ರಾರ್, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು,
6. ರಿಜಿಸ್ಟ್ರಾರ್, ಕರ್ನಾಟಕ ಆಡಳಿತ ನ್ಯಾಯ ಮಂಡಳಿ, ಬೆಂಗಳೂರು,
7. ಕಾರ್ಯದರ್ಶಿಗಳು, ಕರ್ನಾಟಕ ಲೋಕಸೇವಾ ಆಯೋಗ, ಬೆಂಗಳೂರು
8. ಕಾರ್ಯದರ್ಶಿಗಳು, ಕನ್ನಡ ಅಭಿವೃದ್ಧಿ ಪ್ರಾಧಿಕಾರ, ಬೆಂಗಳೂರು
9. ಕಾರ್ಯದರ್ಶಿಗಳು, ಕರ್ನಾಟಕ ವಿಧಾನ ಸಭೆ/ ವಿಧಾನ ಪರಿಷತ್, ವಿಧಾನ ಸೌಧ, ಬೆಂಗಳೂರು.
10. ಎಲ್ಲಾ ಜಿಲ್ಲಾಧಿಕಾರಿಗಳಿಗೆ,
11. ಎಲ್ಲಾ ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳು,
12. ಆಯುಕ್ತರು, ಖಜಾನೆ ಆಯುಕ್ತಾಲಯ, 6ನೇ ಮಹಡಿ, ಕೆಪಿಸಿಎಲ್ ಗ್ರೀನ್ ಬಿಲ್ಡಿಂಗ್, ಔಷಧ ನಿಯಂತ್ರಣ ಕಟ್ಟಡ ಆವರಣ, ಅರಮನೆ ರಸ್ತೆ, ಬೆಂಗಳೂರು,
13. ಅಧ್ಯಕ್ಷರು, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಕಬ್ಬನ್ ಉದ್ಯಾನವನ, ಬೆಂಗಳೂರು,
14. ಆರ್ಥಿಕ ಇಲಾಖೆಯ ಗಣಕ ಕೋಶ- ಆರ್ಥಿಕ ಇಲಾಖೆಯ ವೆಬ್-ಸೈಟ್ ನಲ್ಲಿ ಅಪ್ ಲೋಡ್ ಮಾಡಲು,
15. ಕಚೇರಿ ಪ್ರತಿ/ಶಾಖಾ ರಕ್ಷಾ ಕಡತ/ ಹೆಚ್ಚುವರಿ ಪ್ರತಿಗಳು.

EST 8

**GOVERNMENT OF KARNATAKA**

No. FD 84(T) Exp-1/2021

Karnataka Government Secretariat
Vidhana Soudha
Bangalore, Date: 19.11.2021

## Circular

Sub: Guidelines for investment of surplus funds –fixing NPA-reg.

Ref: Circular No. FD 8 TAR 2020, Dated: 12.03.2020

****

In the Circular referred above certain guidelines have been issued by Finance Department for the investment of surplus funds by the State Public Enterprises.

Hence, Net NPA % as on 31.03.2021 is fixed at 3.90% for all Scheduled Commercial Banks and at 9.70% for Regional Rural Banks for the year 2021-22 till 31.07.2022.

(N. Vanitha)
Under Secretary to Govt.
Finance Department (Exp-1&Investment).

To,

1. The Principal Accountant General (A&E), Karnataka, Bengaluru.
2. The Principal Accountant General (G&SSA), Karnataka, Bengaluru.
3. Additional Chief Secretaries/Principal Secretaries/Secretaries to Government.
4. Secretary to Government, Department of Public Enterprises, M.S. Building, Bengaluru.
5. All Heads of Departments.

Est 8 ... 19/11

<u>ಕರ್ನಾಟಕ ಸರ್ಕಾರ</u>

ಸಂಖ್ಯೆ: ಸಿಆಸುಇ/65/ಸೇನಿಸಿ/ 2021

ಕರ್ನಾಟಕ ಸರ್ಕಾರದ ಸಚಿವಾಲಯ
ವಿಧಾನಸೌಧ,
ಬೆಂಗಳೂರು, ದಿನಾಂಕ: 02.11.2021

<u>ಸುತ್ತೋಲೆ</u>

ವಿಷಯ:ಸರ್ಕಾರಿ ನೌಕರರು ಸ್ಥಿರಾಸ್ತಿ/ ಚರಾಸ್ತಿಯ ವ್ಯವಹರಣೆಯನ್ನು ವರದಿ ಮಾಡುವ ಬಗ್ಗೆ.

*****

1. ಕರ್ನಾಟಕ ರಾಜ್ಯ ನಾಗರಿಕ ಸೇವಾ (ನಡತೆ) ನಿಯಮಗಳು, 2021 (ಸಂಕ್ಷಿಪ್ತವಾಗಿ '2021ರ ನಿಯಮಗಳು'), ದಿನಾಂಕ:- 07-01-2021 ರಿಂದ ಜಾರಿಗೆ ಬಂದಿರುತ್ತದೆ.

2. 2021ರ ನಿಯಮಗಳ ನಿಯಮ 24(3) ರ ಅನುಸಾರ ತನ್ನೊಂದಿಗೆ ಅಧಿಕೃತ ವ್ಯವಹಾರವನ್ನು ಹೊಂದಿರುವ ವ್ಯಕ್ತಿಯನ್ನು ಹೊರತುಪಡಿಸಿ, ಬೇರೆ ಮೂಲಗಳಿಂದ ತನ್ನ ಹೆಸರಿನಲ್ಲಾಗಲಿ ಅಥವಾ ತನ್ನ ಕುಟುಂಬದ ಯಾವುದೇ ಸದಸ್ಯನ ಹೆಸರಿನಲ್ಲಾಗಲಿ ಗುತ್ತಿಗೆಯ, ಅಡಮಾನದ, ಖರೀದಿಯ, ಮಾರಾಟದ, ಉಡುಗೊರೆಯ ಮೂಲಕ ಅಥವಾ ಅನ್ಯಥಾ ಸ್ಥಿರ ಸ್ವತ್ತನ್ನು ಅರ್ಜಿಸುವ ಅಥವಾ ವಿಲೇ ಮಾಡುವ ಬಗ್ಗೆ ನಿಯಮಿಸಲಾದ ಪ್ರಾಧಿಕಾರಕ್ಕೆ ಮೊದಲೇ ತಿಳಿಸಬೇಕಾಗುತ್ತದೆ. ಒಂದು ವೇಳೆ ಸಮರ್ಥನೀಯ ಕಾರಣಗಳಿಂದಾಗಿ ನಿಯಮಿತ ಪ್ರಾಧಿಕಾರಿಗೆ ಮೊದಲೇ ತಿಳಿಸದೇ ಯಾವುದೇ ಸ್ಥಿರ ಸ್ವತ್ತನ್ನು ಅರ್ಜಿಸಿದ್ದಲ್ಲಿ ಅಥವಾ ವಿಲೇ ಮಾಡಿದ್ದಲ್ಲಿ ಅಂತಹ ವ್ಯವಹಾರ ಕೈಗೊಂಡ ಎರಡು ತಿಂಗಳೊಳಗಾಗಿ ವಿವರಗಳು ಹಾಗೂ ಪೂರಕ ದಾಖಲೆಗಳು ಮತ್ತು ಸಮರ್ಥನೀಯ ಕಾರಣಗಳೊಂದಿಗೆ ನಿಯಮಿತ ಪ್ರಾಧಿಕಾರಿಗೆ ವರದಿ ಮಾಡಲು ಅವಕಾಶ ಕಲ್ಪಿಸಲಾಗಿದೆ. ಹಾಗೆ ಸರ್ಕಾರಿ ನೌಕರನು ನೀಡಿದ ಕಾರಣಗಳು ಅಂಗೀಕಾರಾರ್ಹವೆಂದು ತೃಪ್ತಿಪಟ್ಟಲ್ಲಿ, ಸರ್ಕಾರಿ ನೌಕರನು ಸಲ್ಲಿಸಿದ ದಾಖಲೆಗಳು ಹಾಗೂ ವಿವರಗಳನ್ನು ಪರಿಶೀಲಿಸಿ ಅಂತಹ ವ್ಯವಹರಣೆಯನ್ನು ಘಟನೋತ್ತರವಾಗಿ ನಿಯಮಿತ ಪ್ರಾಧಿಕಾರವು ಟಿಪ್ಪಣಿ ಮಾಡಿಕೊಳ್ಳಬಹುದಾಗಿದೆ. ತನ್ನೊಂದಿಗೆ ಅಧಿಕೃತ ವ್ಯವಹಾರವನ್ನು ಹೊಂದಿರುವ ವ್ಯಕ್ತಿಯೊಂದಿಗಿನ ವ್ಯವಹಾರವಾದರೆ ಮಾತ್ರ ಸರ್ಕಾರಿ ನೌಕರನಿಗೆ ನಿಯಮಿಸಲಾದ ಪ್ರಾಧಿಕಾರಿಯ ಪೂರ್ವ ಮಂಜೂರಾತಿ ಅಗತ್ಯವಿರುತ್ತದೆ.

3. 2021ರ ನಿಯಮಗಳ ನಿಯಮ 24(4)ರ ಅನುಸಾರ ಸರ್ಕಾರಿ ನೌಕರನು ತನ್ನ ಸ್ವಂತ ಹೆಸರಿನಲ್ಲಾಗಲೀ ಅಥವಾ ತನ್ನ ಕುಟುಂಬದ ಯಾರೇ ಸದಸ್ಯರ ಹೆಸರಿನಲ್ಲಾಗಲೀ ತಾನು ಅಥವಾ ತನ್ನ ಕುಟುಂಬದ ಯಾರೇ ಸದಸ್ಯರು ಒಡೆತನ ಹೊಂದಿರುವ ಅಥವಾ ಧಾರಣ ಮಾಡಿರುವ ಚರಾಸ್ತಿಯ ಸಂಬಂಧದಲ್ಲಿ ಮಾಡುವ ಪ್ರತಿಯೊಂದು ವ್ಯವಹಾರವನ್ನು ಅಂತಹ ಸ್ವತ್ತಿನ ಮೌಲ್ಯವು ಆತನ ಮಾಸಿಕ ಮೂಲವೇತನ ಮೀರಿದರೆ ನಿಯಮಿಸಿದ ಪ್ರಾಧಿಕಾರಕ್ಕೆ ವರದಿ ಮಾಡತಕ್ಕದ್ದು. ತನ್ನೊಂದಿಗೆ ಅಧಿಕೃತ ವ್ಯವಹಾರವನ್ನು ಹೊಂದಿರುವ ವ್ಯಕ್ತಿಯೊಂದಿಗಿನ ವ್ಯವಹಾರವಾದರೆ ಮಾತ್ರ ನಿಯಮಿಸಲಾದ ಪ್ರಾಧಿಕಾರದ ಪೂರ್ವ ಮಂಜೂರಾತಿಯ ಅಗತ್ಯವಿರುತ್ತದೆ.

---2

4. 2021ರ ನಿಯಮಗಳ ನಿಯಮ 24(3) ಮತ್ತು 24(4)ರ ಹಿನ್ನೆಲೆಯಲ್ಲಿ ಮೇಲಿನ ಕಂಡಿಕೆಗಳಲ್ಲಿ ಸ್ಪಷ್ಟಪಡಿಸಿರುವಂತೆ ಅಗತ್ಯವಿರುವ ಪ್ರಕರಣಗಳಲ್ಲಿ ಮಾತ್ರ ಪೂರ್ವ ಮಂಜೂರಾತಿ ನೀಡಲು ನಿಯಮಿಸಿದ ಪ್ರಾಧಿಕಾರಗಳು ಕ್ರಮ ವಹಿಸಬೇಕೆಂದು ಸೂಚಿಸಿದೆ. ಈ ಸುತ್ತೋಲೆಯ ಅಂಶಗಳನ್ನು ಎಲ್ಲಾ ನಿಯಮಿಸಿದ ಪ್ರಾಧಿಕಾರಗಳು ಹಾಗೂ ಸರ್ಕಾರಿ ನೌಕರರ ಗಮನಕ್ಕೆ ತರುವಂತೆ ಸರ್ಕಾರದ ಎಲ್ಲಾ ಅಪರ ಮುಖ್ಯ/ಪ್ರಧಾನ/ ಕಾರ್ಯದರ್ಶಿಗಳು ಹಾಗೂ ಇಲಾಖಾ ಮುಖ್ಯಸ್ಥರುಗಳಿಗೆ ತಿಳಿಸಿದೆ.

21/11/2024
( ನಾಗರತ್ನ ವಿ.ಪಾಟೀಲ್ )
ಸರ್ಕಾರದ ಅಧೀನ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಸೇವಾ ನಿಯಮಗಳು-2)

ಇವರಿಗೆ:-

ಸಂಕಲನಕಾರರು, ಕರ್ನಾಟಕ ಇ ರಾಜ್ಯ ಪತ್ರ.

ಪ್ರತಿಯನ್ನು:-

1. ಸರ್ಕಾರದ ಮುಖ್ಯ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರು.
4. ಮುಖ್ಯಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿ/ಕಾರ್ಯದರ್ಶಿ.
5. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿಗಳು.
6. ರಾಜ್ಯಪಾಲರ ವಿಶೇಷ ಕಾರ್ಯದರ್ಶಿ.
7. ನಿವಾಸಿ ಆಯುಕ್ತರು, ಕರ್ನಾಟಕ ಭವನ, ಕೌಟಿಲ್ಯ ಮಾರ್ಗ, ಚಾಣಕ್ಯಪುರಿ, ನವದೆಹಲಿ-110 011.
8. ಎಲ್ಲಾ ಇಲಾಖಾ ಮುಖ್ಯಸ್ಥರು
9. ಎಲ್ಲಾ ಪ್ರಾದೇಶಿಕ ಆಯುಕ್ತರು
10. ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು/ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್
11. *ಕಾರ್ಯದರ್ಶಿ, ಕರ್ನಾಟಕ ವಿಧಾನಸಭೆ/ಪರಿಷತ್ತು, ಬೆಂಗಳೂರು
12. *ಮಹಾನಿಬಂಧಕರು, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು.
13. *ನಿಬಂಧಕರು, ಕರ್ನಾಟಕ ರಾಜ್ಯ ಆಡಳಿತ ನ್ಯಾಯಮಂಡಳಿ, ಕಂದಾಯ ಭವನ, ಕೆ.ಜಿ.ರಸ್ತೆ, ಬೆಂಗಳೂರು-9.
14. *ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬಹುಮಹಡಿ ಕಟ್ಟಡ, ಬೆಂಗಳೂರು.
15. *ನಿಬಂಧಕರು, ಕರ್ನಾಟಕ ಮೇಲ್ಮನವಿ ಪ್ರಾಧಿಕಾರ, ಬೆಂಗಳೂರು.
16. *ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಉದ್ಯೋಗಸೌಧ, ಬೆಂಗಳೂರು
17. ಸರ್ಕಾರದ ಎಲ್ಲಾ ವಿಶೇಷ/ಅಪರ/ಜಂಟಿ/ಉಪ/ಅಧೀನ ಕಾರ್ಯದರ್ಶಿಗಳು.
18. ರಕ್ಷಾ ಕಡತ/ಬಿಡಿ ಪ್ರತಿಗಳು.

(*ಪ್ರತ್ಯೇಕ ಪತ್ರದೊಂದಿಗೆ)

File No.DPAR/05/PMS/2021-DPAR PERS 2-DPAR

# ಕರ್ನಾಟಕ ಸರ್ಕಾರ

ಸಂಖ್ಯೆ: ಸಿಆಸುಇ 05 ಪಿಎಂಎಸ್ 2021

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ:21.01.2021.

## ಸುತ್ತೋಲೆ

ವಿಷಯ: ಕ.ನಾ.ಸೇ. (ನಡತೆ) ನಿಯಮಗಳು 2021 ನ್ನು ಜಾರಿಗೆ ತಂದಿರುವ ಬಗ್ಗೆ- ಆಸ್ತಿ ಹೊಣೆಗಾರಿಕೆ ವಿವರಗಳನ್ನು ಸಲ್ಲಿಸುವ ಬಗ್ಗೆ.

* * * * *

ಅಧಿಸೂಚನೆ ಸಂಖ್ಯೆ:ಸಿಆಸುಇ 12 ಸೇನಿಸಿ 2019, ದಿನಾಂಕ:07.01.2021 ರಲ್ಲಿ ಕರ್ನಾಟಕ ನಾಗರಿಕ ಸೇವಾ (ನಡತೆ) ನಿಯಮಗಳು 2021 ನ್ನು ಪರಿಷ್ಕರಿಸಿ ಜಾರಿಗೆ ತಂದಿದ್ದು ಈ ನಿಯಮಗಳಲ್ಲಿನ ಆದೇಶಗಳು ಇವು ಕರ್ನಾಟಕ ರಾಜ್ಯ ಪತ್ರದಲ್ಲಿ ಅಧಿಕೃತವಾಗಿ ಪ್ರಕಟಗೊಂಡ ದಿನಾಂಕದಿಂದ ಜಾರಿಗೆ ಬರತಕ್ಕದ್ದು ಎಂದು ಆದೇಶಿಸಲಾಗಿರುತ್ತದೆ. ಅದರಂತೆ ಈ ಅಧಿಸೂಚನೆಯು ಕರ್ನಾಟಕ ರಾಜ್ಯ ಪತ್ರದಲ್ಲಿ ದಿನಾಂಕ:07.01.2021 ರಂದು ಅಧಿಕೃತವಾಗಿ ಪ್ರಕಟಗೊಂಡಿರುತ್ತದೆ.

ಈ ನಿಯಮಗಳಲ್ಲಿನ ನಿಯಮ 24ರನ್ವಯ ಪ್ರತಿಯೊಬ್ಬ ರಾಜ್ಯ ಸರ್ಕಾರಿ ನೌಕರನು ಯಾವುದೇ ಸೇವೆಗೆ ಅಥವಾ ಹುದ್ದೆಗೆ ಪ್ರಥಮವಾಗಿ ನೇಮಕಗೊಂಡಾಗ ತನ್ನ ಸ್ವಂತ ಹೆಸರಿನಲ್ಲಿ ಅಥವಾ ತನ್ನ ಕುಟುಂಬದ ಯಾವುದೇ ಸದಸ್ಯರ ಹೆಸರಿನಲ್ಲಿ ಅಥವಾ ಇತರೆ ವ್ಯಕ್ತಿಯ ಹೆಸರಿನಲ್ಲಿ ಪಿತ್ರಾರ್ಜಿತವಾಗಿ ಬಂದ ಸ್ವಯಂ ಅರ್ಜಿಸಿದ ಅಥವಾ ಗುತ್ತಿಗೆ ಅಥವಾ ಅಡಮಾನದ ಮೇಲೆ ತಾನು ಹೊಂದಿರುವ ಸ್ಥಿರಾಸ್ತಿಯ ಸಂಪೂರ್ಣ ವಿವರಗಳನ್ನು ನೀಡಿ ನಿಗಧಿತ ನಮೂನೆಯಲ್ಲಿ ತನ್ನ ಚರ ಮತ್ತು ಸ್ಥಿರಾಸ್ತಿಗಳ ವಿವರಗಳ ಪಟ್ಟಿಯನ್ನು ಪೂರಕ ದಾಖಲೆಗಳೊಂದಿಗೆ ಮೂರು ತಿಂಗಳ ಒಳಗಾಗಿ ಸಲ್ಲಿಸತಕ್ಕದ್ದು ಹಾಗೂ ತರುವಾಯ ಡಿಸೆಂಬರ್ 31 ಕ್ಕೆ ಅಂತ್ಯಗೊಳ್ಳುವ ಪ್ರತಿ 12 ತಿಂಗಳಿಗೊಮ್ಮೆ ತನ್ನ ಹಾಗೂ ತನ್ನ ಕುಟುಂಬದ ಎಲ್ಲಾ ಸದಸ್ಯರ ಆಸ್ತಿಗಳ ಮತ್ತು ಹೊಣೆಗಾರಿಕೆಗಳ ವಾರ್ಷಿಕ ವಿವರ ಪಟ್ಟಿಯನ್ನು ನಿಗಧಿತ ನಮೂನೆಯಲ್ಲಿ ಸಂಪೂರ್ಣ ವಿವರಗಳೊಂದಿಗೆ ಸಲ್ಲಿಸತಕ್ಕದ್ದು ಎಂದು ತಿಳಿಸಲಾಗಿರುತ್ತದೆ.

ಈ ಹಿನ್ನೆಲೆಯಲ್ಲಿ ಕರ್ನಾಟಕ ಸರ್ಕಾರ ಸಚಿವಾಲಯದ ಗ್ರೂಪ್-ಎ/ಬಿ/ಸಿ/ಡಿ ವರ್ಗದ ಎಲ್ಲಾ ಅಧಿಕಾರಿ/ನೌಕರರು ತಮ್ಮ ಚರ-ಸ್ಥಿರ ಆಸ್ತಿಗಳ ವಿವರಗಳನ್ನು ಇದುವರೆವಿಗೂ ಸಲ್ಲಿಸುತ್ತಿದ್ದ ಮಾರ್ಚ್-31 ಕ್ಕೆ ಅಂತ್ಯಗೊಳ್ಳುವ ಪ್ರತಿ 12 ತಿಂಗಳಿಗೊಮ್ಮೆ ಎನ್ನುವುದಕ್ಕೆ ಬದಲಾಗಿ ಇನ್ನು ಮುಂದೆ ಡಿಸೆಂಬರ್-31 ಕ್ಕೆ ಅಂತ್ಯಗೊಳ್ಳುವ ಪ್ರತಿ 12 ತಿಂಗಳಿಗೊಮ್ಮೆ ನಿಗಧಿತ ನಮೂನೆಯಲ್ಲಿ ಭರ್ತಿ ಮಾಡಿ ಅಗತ್ಯ ದಾಖಲೆಗಳೊಂದಿಗೆ ಸಂಬಂಧಿಸಿದ ಇಲಾಖೆಗಳ ಮೇಲಾಧಿಕಾರಿಗಳ ಮುಖಾಂತರ ಅಧೀನ ಕಾರ್ಯದರ್ಶಿ, ಸಿಆಸುಇ(ಸಿಬ್ಬಂದಿ)/(ಸೇವೆಗಳು-6) ಇವರಿಗೆ ಸಲ್ಲಿಸತಕ್ಕದ್ದು ಎಂದು ಈ ಮೂಲಕ ತಿಳಿಸಲಾಗಿದೆ.

(ಎಸ್.ವಿ. ಶಂಕರ್) 21/01/2021
ಸರ್ಕಾರದ ಅಧೀನ ಕಾರ್ಯದರ್ಶಿ,
ಸಿ.ಆ.ಸು.ಇ. (ಸಿಬ್ಬಂದಿ)

ಇವರಿಗೆ:

1) ಎಲ್ಲಾ ಇಲಾಖೆಗಳ ಸರ್ಕಾರದ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿಗಳು.
2) ಎಲ್ಲಾ ಇಲಾಖೆಗಳ ಸರ್ಕಾರದ ವಿಶೇಷ/ಅಪರ/ಜಂಟಿ/ಉಪ/ಅಧೀನ ಕಾರ್ಯದರ್ಶಿಗಳು.
3) ಎಲ್ಲಾ ಇಲಾಖೆಗಳ ಒ&ಎಂ ಅಧಿಕಾರಿಗಳು ಈ ಸುತ್ತೋಲೆಯ ಮಾಹಿತಿಯನ್ನು ಎಲ್ಲಾ ಅಧಿಕಾರಿ/ನೌಕರರ ಗಮನಕ್ಕೆ ತರುವ ಸಲುವಾಗಿ.
4) ಸೂಚನಾ ಫಲಕ.
5) ರಕ್ಷಾ ಕಡತ ಹಾಗೂ ಹೆಚ್ಚುವರಿ ಪ್ರತಿಗಳು.

ನಮೂನೆ-I
(ನಿಯಮ 24ನ್ನು ನೋಡಿ)

20—ನೇಸಾಲಿಗೆಸಂಬಂಧಿಸಿದಸ್ಥಿರಾಸ್ತಿವಿವರಣಪಟ್ಟಿ
(31ನೇ ಡಿಸೆಂಬರ್ 20 ____ ರಂದುಇದ್ದಂತೆ)

1. ಅಧಿಕಾರಿಯಹೆಸರು (ಪೂರ್ಣಹೆಸರುಮತ್ತುಅಧಿಕಾರಿಯುಯಾವಸೇವೆಗೆಸೇರಿದವರಾಗಿದ್ದಾರೆ):
2. ಪ್ರಸ್ತುತಧಾರಣಮಾಡಿರುವಹುದ್ದೆ:
3. ಪ್ರಸ್ತುತವೇತನ:

| ಆಸ್ತಿಯಿರುವಜಿಲ್ಲೆ, ಉಪವಿಭಾಗ, ತಾಲ್ಲೂಕು, ಗ್ರಾಮದಹೆಸರು | ಭೂಮಿ, ಆಸ್ತಿ/ಮನೆ ಮತ್ತು ಇತರ ಕಟ್ಟಡದ ಹೆಸರು ಮತ್ತು ವಿವರಗಳು, ಪಾವತಿಸಿರುವಬೆಲೆ | ಈಗಿನಮೌಲ್ಯ (ಅಂದಾಜು ) | ಸರ್ಕಾರಿನೌಕರನ ಹೆಸರಿನಲ್ಲಿಲ್ಲದಿದ್ದರೆ ಯಾರಹೆಸರಿನಲ್ಲಿದೆ ಮತ್ತುಸರ್ಕಾರಿ ನೌಕರನೊಂದಿಗೆ ಅವರಿಗಿರುವ ಸಂಬಂಧ ತಿಳಿಸಿ | ಹೇಗೆಅರ್ಜಿಸಲಾಯಿತು, ಖರೀದಿಯಮೂಲಕವೇ, ಗುತ್ತಿಗೆಯಮೂಲಕವೇ, ಅಡಮಾನದಮೂಲಕವೇ, ಪಿತ್ರಾರ್ಜಿತವೇಅಥವಾ ಬೇರೆರೀತಿಯಲ್ಲಿಅರ್ಜಿಸಿದ್ದೇ? ಅರ್ಜಿಸಿದದಿನಾಂಕ | ಆಸ್ತಿಯಿಂದ ಬಂದ ವಾರ್ಷಿಕ ಆದಾಯ | ಷರಾ |
|---|---|---|---|---|---|---|
| 1 | 2 | 3 | 4 | 5 | 6 | 7 |
| | | | | | | |

ಸಹಿ/-
ಪದನಾಮ

ನಮೂನೆ-II
(ನಿಯಮ 24ನ್ನು ನೋಡಿ)

20—ನೇಸಾಲಿಗೆಸಂಬಂಧಿಸಿದಚರಾಸ್ತಿವಿವರಣಪಟ್ಟಿ
(31ನೇ ಡಿಸೆಂಬರ್ 20 ____ ರಂದುಇದ್ದಂತೆ)

1. ಹೆಸರು
2. ಪದನಾಮ
3. ವೇತನಶ್ರೇಣಿಮತ್ತುಈಗಿನವೇತನ

| ಕ್ರಮಸಂಖ್ಯೆ | ಬ್ಯಾಂಕುಗಳು/ಅಂಚೆ/ ಕಛೇರಿಯಲ್ಲಿಹೊಂದಿರುವಖಾತೆಗಳು/ ಸ್ಟಾಕುಗಳು/ ಷೇರುಗಳು/ಡಿಬೆಂಚರುಗಳೂ ಸೇರಿದಂತೆಚರಾಸ್ತಿಗಳವಿವರಗಳು | ಚರಾಸ್ತಿಯಮೌಲ್ಯ | ಖರೀದಿ/ ವಿಲೇವಾರಿಯ ದಿನಾಂಕ: | ಅಂಕಣಸಂ. 2ರಲ್ಲಿ ಹೇಳಿರುವ ಚರಾಸ್ತಿಯನ್ನು ಖರೀದಿಸುವುದಕ್ಕೆಇದ್ದ ಆದಾಯದಮೂಲಗಳು | ಆಸ್ತಿಯನ್ನುಅರ್ಜಿಸಿದ ಬಗ್ಗೆ ಸರ್ಕಾರಕ್ಕೆ ವರದಿ ಸಲ್ಲಿಸಿದ ದಿನಾಂಕ | ಷರಾ |
|---|---|---|---|---|---|---|
| 1 | 2 | 3 | 4 | 5 | 6 | 7 |
| | | | | | | |

ಸಹಿ/-
ಪದನಾಮ

EST 8

## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ರಾಷ್ಟ್ರೀಯ ಪಿಂಚಣಿ ಯೋಜನೆಗೆ ಒಳಪಡುವ ಸರ್ಕಾರಿ ಅಧಿಕಾರಿ/ನೌಕರರು ನಿವೃತ್ತಿ, ಮರಣ, ರಾಜೀನಾಮೆ ಸಂದರ್ಭದಲ್ಲಿ ಪ್ರಾನ್ ಖಾತೆಯಲ್ಲಿನ ಮೊತ್ತವನ್ನು ಹಿಂಪಡೆಯುವ ಕುರಿತು.

ಓದಲಾಗಿದೆ:

1. ಸರ್ಕಾರದ ಆದೇಶ ಸಂಖ್ಯೆ: ಆಇ (ವಿ) 203 ಪಿಇಎನ್ 2012 (ಭಾ), ದಿನಾಂಕ:18.05.2016.
2. PFRDA (Exits and Withdrawals under the NPS (Amendment) Regulation, 2021, ದಿನಾಂಕ: 14.06.2021
3. ಖಜಾನೆ ಆಯುಕ್ತರ ಪತ್ರ ಸಂಖ್ಯೆ: ಖನಿ/ಎನ್.ಪಿ.ಎಸ್./EXIT/01/2021-22, ದಿನಾಂಕ: 18.08.2021.

ಪ್ರಸ್ತಾವನೆ:

ಮೇಲೆ ಓದಲಾದ (1) ರ ಸರ್ಕಾರದ ಆದೇಶದಲ್ಲಿ ರಾಷ್ಟ್ರೀಯ ಪಿಂಚಣಿ ಯೋಜನೆಗೆ ಒಳಪಡುವ ಸರ್ಕಾರಿ ನೌಕರರು ನಿವೃತ್ತರಾದರೆ/ಸೇವೆಯಲ್ಲಿ ಇರುವಾಗಲೇ ಮೃತರಾದರೆ / ರಾಜೀನಾಮೆ ನೀಡಿದ ಸಂದರ್ಭದಲ್ಲಿ ಅವರುಗಳ ಪ್ರಾನ್ ಖಾತೆಯಲ್ಲಿನ ಮೊತ್ತವನ್ನು ಈ ಕೆಳಕಂಡಂತೆ ಇತ್ಯರ್ಥಪಡಿಸಲಾಗುತ್ತಿದೆ:-

a. ನೌಕರರು ಸೇವೆಯಲ್ಲಿರುವಾಗಲೇ ಮೃತರಾದರೆ ಪ್ರಾನ್ ಖಾತೆಯಲ್ಲಿ ರೂ. 2.00 ಲಕ್ಷಕ್ಕಿಂತ ಕಡಿಮೆ ಮೊತ್ತವಿದ್ದರೆ ನೌಕರರ ನಾಮ ನಿರ್ದೇಶಿತರಿಗೆ ಪ್ರಾನ್ ಖಾತೆಯಲ್ಲಿರುವ ಸಂಪೂರ್ಣ ಮೊತ್ತವನ್ನು ಇತ್ಯರ್ಥಪಡಿಸಲಾಗುವುದು ಹಾಗೂ ಪ್ರಾನ್ ಖಾತೆಯಲ್ಲಿನ ಮೊತ್ತವು ರೂ.2.00 ಲಕ್ಷಕ್ಕಿಂತ ಮೇಲ್ಪಟ್ಟಿದ್ದರೆ ಪ್ರಾನ್ ಖಾತೆಯಲ್ಲಿರುವ 20% ಮೊತ್ತವನ್ನು ನೌಕರರ ನಾಮನಿರ್ದೇಶಿತರು ಹಿಂಪಡೆಯಬಹುದಾಗಿದ್ದು, ಉಳಿದ 80% ಮೊತ್ತವನ್ನು ಮಾಸಿಕ ಪಿಂಚಣಿಗಾಗಿ ASP ಯಲ್ಲಿ ಹೂಡಿಕೆ ಮಾಡಬೇಕಿರುತ್ತದೆ.

b. ಎನ್.ಪಿ.ಎಸ್. ಯೋಜನೆಯಡಿ ನಿವೃತ್ತಿ ಹೊಂದಿದ ನೌಕರರ ಪ್ರಾನ್ ಖಾತೆಯಲ್ಲಿ ರೂ.2.00 ಲಕ್ಷಕ್ಕಿಂತ ಕಡಿಮೆ ಮೊತ್ತವಿದ್ದರೆ ನೌಕರರಿಗೆ ಪ್ರಾನ್ ಖಾತೆಯಲ್ಲಿರುವ ಸಂಪೂರ್ಣ ಮೊತ್ತವನ್ನು ಇತ್ಯರ್ಥಪಡಿಸಲಾಗುವುದು ಹಾಗೂ ಪ್ರಾನ್ ಖಾತೆಯಲ್ಲಿನ ಮೊತ್ತವು ಎರಡು ಲಕ್ಷಕ್ಕಿಂತ ಮೇಲ್ಪಟ್ಟಿದ್ದರೆ ಪ್ರಾನ್ ಖಾತೆಯಲ್ಲಿರುವ 60% ಮೊತ್ತವನ್ನು ನೌಕರರು ಹಿಂಪಡೆಯಬಹುದಾಗಿದ್ದು, ಉಳಿದ 40% ಮೊತ್ತವನ್ನು ಮಾಸಿಕ ಪಿಂಚಣಿಗಾಗಿ Annuity Service Provider ಯಲ್ಲಿ ಹೂಡಿಕೆ ಮಾಡಬೇಕಿರುತ್ತದೆ.

c. ಎನ್.ಪಿ.ಎಸ್. ಯೋಜನೆಯಡಿ ಸೇವೆಗೆ ರಾಜೀನಾಮೆ ನೀಡಿದ ನೌಕರರ ಪ್ರಾನ್ ಖಾತೆಯಲ್ಲಿ ರೂ.1.00 ಲಕ್ಷಕಿಂತ ಕಡಿಮೆ ಮೊತ್ತವಿದ್ದರೆ ನೌಕರರ ಪ್ರಾನ್ ಖಾತೆಯಲ್ಲಿನ ಸಂಪೂರ್ಣ ಮೊತ್ತವನ್ನು ಇತ್ಯರ್ಥ ಪಡಿಸಲಾಗುವುದು. ನೌಕರರ ಪ್ರಾನ್ ಖಾತೆಯಲ್ಲಿನ ಮೊತ್ತವು ರೂ. 1.00 ಲಕ್ಷಕ್ಕಿಂತ ಮೇಲ್ಪಟ್ಟಿದ್ದರೆ ಶೇ. 20 ರಷ್ಟು ಮೊತ್ತವನ್ನು ನೌಕರರು ಹಿಂಪಡೆಯಬಹುದಾಗಿದ್ದು, ಉಳಿಕೆ ಶೇ. 80 ರಷ್ಟು ಮೊತ್ತವನ್ನು ಮಾಸಿಕ ಪಿಂಚಣಿಗಾಗಿ ASPಯಲ್ಲಿ ಹೂಡಿಕೆ ಮಾಡಬೇಕಿರುತ್ತದೆ.

ಮೇಲೆ ಓದಲಾದ (3) ರ ಖಜಾನೆ ಆಯುಕ್ತರ ಪತ್ರದಲ್ಲಿ ಎನ್.ಪಿ.ಎಸ್. ಯೋಜನೆಗೆ ಒಳಪಡುವ ಅಧಿಕಾರಿ/ನೌಕರರು ನಿವೃತ್ತಿ, ಮರಣ, ರಾಜೀನಾಮೆ ಇಂತಹ ಸಂದರ್ಭದಲ್ಲಿ ತಮ್ಮ ಪ್ರಾನ್ ಖಾತೆಯಲ್ಲಿನ ಮೊತ್ತವನ್ನು ಹಿಂಪಡೆಯುವ ಪ್ರಕ್ರಿಯೆಯಲ್ಲಿ ಪಿ.ಎಫ್.ಆರ್.ಡಿ.ಎ. ರವರ PFRDA (Exits and Withdrawals under the NPS (Amendment) Regulation, 2021, ದಿನಾಂಕ: 14.06.2021ರಲ್ಲಿರುವಂತೆ ರಾಜ್ಯ ಸರ್ಕಾರದಲ್ಲಿಯೂ ಸಹ ಎನ್.ಪಿ.ಎಸ್. ಮೊತ್ತವನ್ನು ಹಿಂಪಡೆಯುವ ಪ್ರಕ್ರಿಯೆಯಲ್ಲಿ ಮಾರ್ಪಾಡು ಮಾಡಿ ಆದೇಶವನ್ನು ಹೊರಡಿಸುವಂತೆ ಕೋರಿ ಸಲ್ಲಿಸಿರುವ ಪ್ರಸ್ತಾವನೆಯನ್ನು ಪರಿಶೀಲಿಸಲಾಯಿತು.

ಪ್ರಸ್ತಾವನೆಯನ್ನು ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಲಾಗಿದೆ.

**ಸರ್ಕಾರದ ಆದೇಶ ಸಂಖ್ಯೆ: ಆಇ 201 ಪಿಇಎನ್ 2021, ಬೆಂಗಳೂರು, ದಿನಾಂಕ: 29.11.2021**

ರಾಷ್ಟ್ರೀಯ ಪಿಂಚಣಿ ಯೋಜನೆಗೆ ಒಳಪಡುವ ಸರ್ಕಾರಿ ಅಧಿಕಾರಿ/ನೌಕರರು ನಿವೃತ್ತಿ, ಮರಣ, ರಾಜೀನಾಮೆ ಇಂತಹ ಸಂದರ್ಭದಲ್ಲಿ ತಮ್ಮ ಪ್ರಾನ್ ಖಾತೆಯಲ್ಲಿನ ಮೊತ್ತವನ್ನು ಹಿಂಪಡೆಯುವ ಪ್ರಕ್ರಿಯೆಯಲ್ಲಿ ಸರ್ಕಾರದ ಆದೇಶ ಸಂಖ್ಯೆ: ಆಇ (ವಿ) 203 ಪಿಇಎನ್ 2012 (ಭಾ), ದಿನಾಂಕ:18.05.2016ರಲ್ಲಿರುವ ಗರಿಷ್ಠ ಮೊತ್ತವನ್ನು ಪಿ.ಎಫ್.ಆರ್.ಡಿ.ಎ. ರವರು ಮಾರ್ಪಡಿಸಿರುವ ರೀತಿಯಲ್ಲಿ ರಾಜ್ಯ ಸರ್ಕಾರವು ಈ ಕೆಳಕಂಡಂತೆ ಮಾರ್ಪಡಿಸಿ ಆದೇಶಿಸಿದೆ:-

| ಕ್ರ. ಸಂ. | ಹಿಂಪಡೆಯುವ ವಿಧಾನ | ಎನ್.ಪಿ.ಎಸ್. ಕಾರ್ಪಸ್ ನಲ್ಲಿ ಹಳೆಯ ಮಿತಿ (Less than or equal to) | ಎನ್.ಪಿ.ಎಸ್. ಕಾರ್ಪಸ್ ನಲ್ಲಿ ಹೆಚ್ಚಿಸಿರುವ ಮಿತಿ (Less than or equal to) |
|---|---|---|---|
| 1 | ನಿವೃತ್ತಿ | ರೂ. 2 ಲಕ್ಷಗಳು | ರೂ. 5 ಲಕ್ಷಗಳು |
| 2 | ಮರಣ | ರೂ. 2 ಲಕ್ಷಗಳು | ರೂ. 5 ಲಕ್ಷಗಳು |
| 3 | ರಾಜೀನಾಮೆ | ರೂ. 1 ಲಕ್ಷ | ರೂ. 2.5 ಲಕ್ಷಗಳು |

ಇನ್ನುಳಿದಂತೆ ಸರ್ಕಾರದ ಆದೇಶ ದಿನಾಂಕ: 18.05.2016ರಲ್ಲಿನ ಷರತ್ತು/ನಿಬಂಧನೆಗಳು ಮುಂದುವರೆಯುತ್ತವೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಕುಮುಟಾ ಪ್ರಕಾಶ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಆರ್ಥಿಕ ಇಲಾಖೆ (ವಿಶ್ರಾಂತಿ ವೇತನ ಮತ್ತು
ಆರ್ಥಿಕ ಆಯೋಗ ಕೋಶ).
29/11/2021

ಇವರಿಗೆ:-

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು, ಮುಂದಿನ ರಾಜ್ಯಪತ್ರದಲ್ಲಿ ಪ್ರಕಟಿಸುವುದಕ್ಕಾಗಿ.

ಪ್ರತಿ:-
1. ಮಹಾಲೇಖಪಾಲರು (ಎ ಮತ್ತು ಇ) / ಪ್ರಧಾನ ಮಹಾಲೇಖಪಾಲರು / ಲೆಕ್ಕಪರಿಶೋಧಕರು – ಬೆಂಗಳೂರು.

2. ಸರ್ಕಾರದ ಮುಖ್ಯ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
4. ಸರ್ಕಾರದ ಎಲ್ಲಾ ಪ್ರಧಾನ ಕಾರ್ಯದರ್ಶಿಗಳು/ ಕಾರ್ಯದರ್ಶಿಗಳು.
5. ಆಯುಕ್ತರು, ಖಜಾನೆ ಆಯುಕ್ತಾಲಯ, 6ನೇ ಮಹಡಿ, ಕೆ.ಪಿ.ಸಿ.ಎಲ್. ಬಿಲ್ಡಿಂಗ್, ಅರಮನೆ ರಸ್ತೆ, ಬೆಂಗಳೂರು.
6. ಎಲ್ಲಾ ಇಲಾಖಾ ಮುಖ್ಯಸ್ಥರುಗಳು.
7. ಎಲ್ಲಾ ಜಿಲ್ಲಾಧಿಕಾರಿಗಳು.
8. ಎಲ್ಲಾ ಜಿಲ್ಲಾ ಪಂಚಾಯತ್ ರಾಜ್ ಮುಖ್ಯ ಕಾರ್ಯನಿರ್ವಾಹಣಾಧಿಕಾರಿಗಳು/ ಮುಖ್ಯ ಲೆಕ್ಕಾಧಿಕಾರಿಗಳು.
9. ಎಲ್ಲಾ ಜಿಲ್ಲಾ ಖಜಾನಾಧಿಕಾರಿಗಳು.
10. ಜಂಟಿ ನಿರ್ದೇಶಕರು, ನೂತನ ಪಿಂಚಣಿ ಯೋಜನೆ ಘಟಕ, 5 ಮತ್ತು 6ನೇ ಮಹಡಿ, ಕೆ.ಪಿ.ಸಿ.ಎಲ್. ಬಿಲ್ಡಿಂಗ್, ಅರಮನೆ ರಸ್ತೆ, ಬೆಂಗಳೂರು..
11. ಉಪ ನಿರ್ದೇಶಕರು, ಟಿ.ಎನ್.ಎಂ.ಸಿ, ಖನಿಜ ಭವನ, ದೇವರಾಜ್ ಅರಸ್ ರಸ್ತೆ, ಬೆಂಗಳೂರು.
12. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

**ಕರ್ನಾಟಕ ಸರ್ಕಾರ**

ಸಂಖ್ಯೆ: ಸಿಆಸುಇ 11 ಎಆರ್‌ಬಿ 2021

ಕರ್ನಾಟಕ ಸರ್ಕಾರ ಸಚಿವಾಲಯ
ವಿಧಾನ ಸೌಧ, ಬೆಂಗಳೂರು,
ದಿನಾಂಕ: 30.11.2021

ESt 8 ... 14/12

## ಅಧಿಸೂಚನೆ

ಭಾರತ ಸಂವಿಧಾನದ 166ನೇ ಅನುಚ್ಛೇದದ ಕಲಂ (2) ಮತ್ತು (3) ರಿಂದ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಕರ್ನಾಟಕ ರಾಜ್ಯಪಾಲರು, ಕರ್ನಾಟಕ ಸರ್ಕಾರದ (ಕೆಲಸಗಳ ಹಂಚಿಕೆ) ನಿಯಮಗಳು, 1977, ಇದಕ್ಕೆ ಮತ್ತಷ್ಟು ತಿದ್ದುಪಡಿ ಮಾಡಲು ಕೆಳಕಂಡ ನಿಯಮಗಳನ್ನು ಈ ಮೂಲಕ ರಚಿಸಿದ್ದಾರೆ. ಎಂದರೆ,-

**1. ಶೀರ್ಷಿಕೆ ಮತ್ತು ಪ್ರಾರಂಭ,** - 1) ಈ ನಿಯಮಗಳನ್ನು ಕರ್ನಾಟಕ ಸರ್ಕಾರದ (ಕೆಲಸಗಳ ಹಂಚಿಕೆ) (ತಿದ್ದುಪಡಿ) ನಿಯಮಗಳು, 2021 ಎಂದು ಕರೆಯತಕ್ಕದ್ದು.

2) ಇವುಗಳು ಕರ್ನಾಟಕ ರಾಜ್ಯಪತ್ರದಲ್ಲಿ ಪ್ರಕಟಿಸಿದ ದಿನಾಂಕದಂದು ಜಾರಿಗೆ ಬರುತ್ತವೆ.

**2. ಅನುಸೂಚಿ II ಕ್ಕೆ ತಿದ್ದುಪಡಿ,** - ಕರ್ನಾಟಕ ಸರ್ಕಾರದ (ಕೆಲಸಗಳ ಹಂಚಿಕೆ) ನಿಯಮಗಳು, 1977ರ ಅನುಸೂಚಿ II ರಲ್ಲಿ, **"ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ"** ಶೀರ್ಷಿಕೆಯ ಅಡಿಯಲ್ಲಿ **"ಎ. ಸಾರ್ವಜನಿಕ ಸೇವೆಗಳು"** ಉಪಶೀರ್ಷಿಕೆಯಡಿ, ಕ್ರಮ ಸಂಖ್ಯೆ 6 ರಲ್ಲಿನ **"ಮತ್ತು ಇಲಾಖಾ ಮುಖ್ಯಸ್ಥರ ದರ್ಜೆಯ ಎಲ್ಲಾ ಅಧಿಕಾರಿಗಳ"** ಎಂಬ ಪದಗಳನ್ನು ಕೈಬಿಡತಕ್ಕದ್ದು.

ಸಹಿ/-
(ಥಾವರ್‌ಚಂದ್ ಗೆಹ್ಲೋಟ್)
ಕರ್ನಾಟಕ ರಾಜ್ಯಪಾಲರು

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ.

30/11/2021
(ನಾಗರತ್ನ ವಿ.ಪಾಟೀಲ್)
ಸರ್ಕಾರದ ಅಧೀನ ಕಾರ್ಯದರ್ಶಿ
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಸೇವಾ ನಿಯಮಗಳು-2)

**ಇವರಿಗೆ:**
ಸಂಕಲನಕಾರರು, ಇ-ರಾಜ್ಯಪತ್ರ, ಕರ್ನಾಟಕ, ವಿಶೇಷ ರಾಜ್ಯಪತ್ರದಲ್ಲಿ ಪ್ರಕಟಿಸಲು.

<u>ಪ್ರತಿ:</u>

1) ಮಹಾಲೇಖಪಾಲರು (ಜಿ&ಎಸ್ಎಸ್ಎ)/(ಇ&ಆರ್ಎಸ್-ಎ)/(ಎ&ಇ), ಕರ್ನಾಟಕ, ಬೆಂಗಳೂರು.
2) ಸರ್ಕಾರದ ಮುಖ್ಯ ಕಾರ್ಯದರ್ಶಿಯವರು.
3) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರು.
4) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಮತ್ತು ಅಭಿವೃದ್ಧಿ ಆಯುಕ್ತರು.
5) ಮುಖ್ಯ ಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿ / ಕಾರ್ಯದರ್ಶಿಯವರು.
6) ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿಗಳು.
7) ರಾಜ್ಯಪಾಲರ ವಿಶೇಷ ಕಾರ್ಯದರ್ಶಿಯವರು.
8) ಎಲ್ಲಾ ಇಲಾಖಾ ಮುಖ್ಯಸ್ಥರು / ಎಲ್ಲಾ ಉಪ ಆಯುಕ್ತರು/ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್.
9) ನಿವಾಸಿ ಆಯುಕ್ತರು, ಕರ್ನಾಟಕ ಭವನ, ಕೌಟಿಲ್ಯ ಮಾರ್ಗ, ಚಾಣಕ್ಯಪುರಿ, ನವದೆಹಲಿ-110021
10) *ಮಹಾ ನಿಬಂಧಕರು, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು.
11) *ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
12) *ನಿಬಂಧಕರು, ಕರ್ನಾಟಕ ರಾಜ್ಯ ಆಡಳಿತ ನ್ಯಾಯಮಂಡಳಿ, 6ನೇ ಮತ್ತು 7ನೇ ಮಹಡಿ, ಕಂದಾಯ ಭವನ, ಕೆ.ಜಿ.ರಸ್ತೆ, ಬೆಂಗಳೂರು-560009
13) *ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ ಬೆಂಗಳೂರು.
14) *ಕಾರ್ಯದರ್ಶಿ, ಕರ್ನಾಟಕ ವಿಧಾನ ಸಭೆ/ಪರಿಷತ್ತು, ಬೆಂಗಳೂರು.
15) ಎಲ್ಲಾ ಸಚಿವರ ಆಪ್ತ ಕಾರ್ಯದರ್ಶಿ/ರಾಜ್ಯ ಸಚಿವರು.
16) ಅಧ್ಯಕ್ಷರು, ರಾಜ್ಯ ಸರ್ಕಾರಿ ನೌಕರರ ಸಂಘ, ಕಬ್ಬನ್ ಪಾರ್ಕ್, ಬೆಂಗಳೂರು.
17) ಸರ್ಕಾರದ ಎಲ್ಲಾ ವಿಶೇಷ/ಅಪರ/ಜಂಟಿ/ಉಪ/ಅಧೀನ ಕಾರ್ಯದರ್ಶಿಗಳು.
18) ಕರ್ನಾಟಕ ಸರ್ಕಾರ ಸಚಿವಾಲಯದ ಎಲ್ಲಾ ಶಾಖೆಗಳು
19) ಸಚಿವ ಸಂಪುಟ ಶಾಖೆ
20) ಶಾಖಾ ರಕ್ಷಾ ಕಡತ/ಅಧಿಕ ಪ್ರತಿಗಳು.

**(*ಮುಖಪತ್ರದೊಂದಿಗೆ)**

# KARNATAKA GOVERNMENT

No: DPAR 11 ARB 2021

Karnataka Government Secretariat
Vidhanasoudha, Bengaluru
Dated: 30.11.2021

## NOTIFICATION

In exercise of the powers conferred by clauses (2) and (3) of Article 166 of the Constitution of India, the Governor of Karnataka hereby makes the following rules further to amend the Karnataka Government (Allocation of Business) Rules, 1977, namely :-

1. **Title and Commencement** :- 1) These rules may be called the Karnataka Government (Allocation of Business) (Amendment) Rules, 2021.

2) They shall come into force from the date of their publication in the Official Gazette.

2. **Amendment of Schedule II** :- In the Karnataka Government (Allocation of Business) Rules, 1977, in SCHEDULE II, under the heading **"DEPARTMENT OF PERSONNEL AND ADMINISTRATIVE REFORMS"**, under the sub-heading "**A. Public Services**" in serial number 6, the words "**and all officers of the rank of Head of a Department**" shall be omitted.

Sd/-
(THAAWARCHAND GEHLOT)
GOVERNOR OF KARNATAKA.

By Order and in the name of the
Governor of Karnataka

30/11/2021
(Nagarathna V. Patil)
Under Secretary to Government
Department of Personnel and Administrative
Reforms (Service Rules-2)

To
Compiler, e-Gazette, Karnataka, for publication in Extra-ordinary Gazette.

---2

Copy to:

1) The Accountant General (G & S S A)/(E & R S- A)/(A & E), Bengaluru.
2) The Chief Secretary to Government.
3) The Additional Chief Secretary to Government.
4) The Additional Chief Secretary to Government and Development Commissioner.
5) The Additional Chief Secretary/Secretary to Chief Minister.
6) All Additional Chief Secretaries / Principal Secretaries / Secretaries to Government.
7) Special Secretary to Governor.
8) All Heads of Departments/All Deputy Commissioners/Chief Executive Officers of Zilla Panchayats.
9) The Resident Commissioner, Karnataka Bhavan, Kautilya Marg, Chankyapuri, New Delhi- 110 021
10)*The Registrar General, High Court of Karnataka, Bengaluru.
11)*The Registrar, Karnataka Lokayukta, Bengaluru.
12)*The Registrar, Karnataka State Administrative Tribunal, 6$^{th}$ & 7$^{th}$ floor Kandaya Bhavana, K.G Road, Bengaluru.
13)*The Secretary, Karnataka Public Service Commission, Bengaluru.
14)*The Secretary, Karnataka Legislative Assembly/Council, Bengaluru.
15) Private Secretary to all Ministers / State Ministers.
16) President, Karnataka State Government Employees' Association, Cubbon Park, Bengaluru.
17) All Special/Additional/Joint/Deputy/Under Secretaries to Government.
18) All Sections of the Secretariat.
19) Cabinet Section.
20) Section Guard File/ Spare Copies.

**(*With covering letter)**